ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೮

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಶುಕ್ರವಾರ, ದಿನಾಂಕ: ೦೯ನೇ ಜೂನ್, ೨೦೧೭**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ವಸತಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೭. ಸಾರಿಗೆ ಸಚಿವರು

೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

## ವಿಶ್ವವಿದ್ಯಾಲಯಗಳಲ್ಲಿ Local Inspection Committee ಗಳಿಗೆ ಸದಸ್ಯರನ್ನು ನೇಮಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೬(೨೬೧೮) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವವಿದ್ಯಾಲಯಗಳಲ್ಲಿ Local Inspection Committee ವತಿಯಿಂದ ಕಾಲೇಜುಗಳಿಗೆ ಭೇಟಿ ನೀಡಿದಾಗ ಕಾರ್ಯಕಾರಿಣಿ ಸದಸ್ಯರ ಜವಾಬ್ದಾರಿಗಳೇನು;

(ಆ) ಈ ಕಾರ್ಯಕಾರಿಣಿ ಸದಸ್ಯರನ್ನು ವಿಶ್ವವಿದ್ಯಾಲಯಗಳಿಗೆ ನೇಮಿಸುವಾಗ ಪಾಲಿಸಬೇಕಾದ ಮಾನದಂಡಗಳೇನು;

(ಇ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಡಿಯಲ್ಲಿ AMC ಬರುವ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕಾರ್ಯಕಾರಿಣಿ ಸದಸ್ಯರು Local Inspection Committee ಗೆ ಭೇಟಿ ನೀಡಿದ ಸಮಯದಲ್ಲಿ ನಡೆದ ಘಟನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು? (ಪೂರ್ಣ ವಿವರ ನೀಡುವುದು)

## ಕಾಲ್ಪನಿಕ ವೇತನ ಸಮಸ್ಯೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೫೭(೨೪೮೫) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸೇವೆಗೆ ಸೇರಿದ ದಿನಾಂಕ ಹಾಗೂ ಅನುದಾನಕ್ಕೆ ಒಳಪಟ್ಟ ದಿನಾಂಕದ ಮಧ್ಯದ ಸೇವಾವಧಿಯನ್ನು ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಕುರಿತು ಕೋರ್ಟ್‌ಗಳಲ್ಲಿ ಇಲ್ಲಿಯವರೆಗೂ ನಡೆದಿರುವ ವ್ಯಾಜ್ಯಗಳು, ಅವುಗಳ ತೀರ್ಪುಗಳು, ಈಗ ಯಾವ ಹಂತದಲ್ಲಿ ಇದೆ; (ಪ್ರತಿ ಹಂತದ ಸಂಪೂರ್ಣ ವಿವರವನ್ನು ನೀಡುವುದು)

(ಆ) ಪಾಲಿಟೆಕ್ನಿಕ್ ಹಾಗೂ ಉನ್ನತ ಶಿಕ್ಷಣದ ಸಿಬ್ಬಂದಿ ನಿವೃತ್ತರಾಗಿ ಪಿಂಚಣಿಗಾಗಿ ಅರ್ಜಿ ಸಲ್ಲಿಸಿದಾಗ ಈಗಾಗಲೇ ಕಾಲ್ಪನಿಕ ವೇತನ ಪರಿಗಣಿಸಿ ನೀಡಿರುವ ಹಣಕಾಸು ಸೌಲಭ್ಯವನ್ನು ಮರು ಪಾವತಿಸಲು ಸೂಚಿಸಲಾಗುತ್ತಿದೆ ಎನ್ನುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಗೆ ಪರಿಹಾರ ಯಾವ ಸಮಯ ಮಿತಿಯೊಳಗೆ ಮಾಡಲಾಗುವುದು; ಇದಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಗೊಲ್ಲರ ಹಟ್ಟಿಗಳಿಗೆ ವಸತಿ ಕಲ್ಪಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೨೫೮(೨೫೨೨) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೭–೧೮ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಹಾಗೂ ಗೊಲ್ಲರ ಹಟ್ಟಿಗಳಿಗೆ ವಿಶೇಷ ಪ್ಯಾಕೇಜ್ ಮೂಲಕ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಜಿಲ್ಲಾವಾರು ನೀಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು)

## ವಾಜಪೇಯಿ ನಗರ ವಸತಿ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೯(೨೪೭೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಡವರಿಗೆ ಸೂರು ನೀಡುವ ನಿಟ್ಟಿನಲ್ಲಿ ವಾಜಪೇಯಿ ನಗರ ವಸತಿ ಹೆಸರಿನಲ್ಲಿ ೨೦೧೩–೧೪ನೇ ಸಾಲಿನಲ್ಲಿ ವಸತಿ ಯೋಜನೆಯನ್ನು ಜಾರಿಗೆ ತರಲಾಗಿತ್ತೆ; (ವಿವರ ನೀಡುವುದು)

(ಆ) ಈ ಯೋಜನೆಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು; ಇದರಲ್ಲಿ ರಾಜ್ಯ ಸರ್ಕಾರದ ವಂತಿಗೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೩–೧೪ನೇ ಸಾಲಿನಿಂದ ೨೦೧೬–೧೭ನೇ ಸಾಲಿನವರೆಗೆ ಈ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡಿ ಬಡವರಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿದೆ; ಇದಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೧೩-೧೪ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯ ಹತ್ತು ಸ್ಥಳೀಯ ಸಂಸ್ಥೆಗಳಿಗೆ ವಾಜಪೇಯಿ ನಗರ ವಸತಿ ಯೋಜನೆಯಡಿ ಬಿಡುಗಡೆಯಾಗಿರುವ ಹಣವೆಷ್ಟು; ಈ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ, ಬ್ಯಾಂಕಿನಲ್ಲಿ ಠೇವಣಿ ಇಡಲಾಗಿದೆಯೇ; (ವಿವರ ನೀಡುವುದು)

(ಉ) ಈ ಯೋಜನೆಯಡಿ ಅನುದಾನವನ್ನು ಬಳಸಿಕೊಂಡಲ್ಲಿ, ತುಮಕೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ/ನಗರ ಪಾಲಿಕೆ/ ಪುರಸಭೆ/ಪಟ್ಟಣ ಪಂಚಾಯಿತಿಗಳ ಭೌತಿಕ ಪ್ರಗತಿಯ ವಿವರ ನೀಡುವುದು;

(ಊ) ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ರಲ್ಲಿ ಈ ಯೋಜನೆಗೆ ತುಮಕೂರು ಜಿಲ್ಲೆಗೆ ನೀಡಲಾದ ಅನುದಾನ ಎಷ್ಟು; ಹಾಗೂ ಈ ಅನುದಾನದಿಂದ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು; ಈ ಬಗ್ಗೆ ಜಿಲ್ಲೆ ಸ್ಥಳೀಯ ಸಂಸ್ಥೆಗಳವಾರು ಪ್ರಗತಿಯ ವಿವರ ನೀಡುವುದು;

(ಋ) ಯೋಜನೆಯಡಿ ತುಮಕೂರು ಜಿಲ್ಲೆಯಲ್ಲಿ ಬಳಕೆಯಾಗದೆ ಇರುವ ಹಣವೆಷ್ಟು; ಈ ಹಣವನ್ನು ಎಲ್ಲಿ ಠೇವಣಿ ಇಡಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೨೬೦(೨೫೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಗ್ರಾಮ ಪಂಚಾಯಿತಿಗಳಿಗೆ ವಿವಿಧ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು;

(ಆ) ಸದರಿ ಅನುದಾನದಲ್ಲಿ ಖರ್ಚಾಗಿರುವ ಅನುದಾನವೆಷ್ಟು; ಉಳಿದಿರುವ ಅನುದಾನವೆಷ್ಟು? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿ ಬೆಂಚ್/ಡೆಸ್ಕ್ ಖರೀದಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೧(೨೪೭೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಿಂದಲೂ ಕಾರವಾರ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರತಿ ವರ್ಷ ಖರೀದಿಸಿದ ಬೆಂಚ್/ಡೆಸ್ಕ್ ಖರೀದಿ ಪ್ರಕ್ರಿಯೆಯಲ್ಲಿ ಲಕ್ಷಾಂತರ ರೂಪಾಯಿಗಳ ಅವ್ಯವಹಾರ ನಡೆದಿರುವುದು ನಿಜವೇ; ಹಾಗಿದ್ದಲ್ಲಿ, ಅವ್ಯವಹಾರದ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಈ ಅವ್ಯವಹಾರದಲ್ಲಿ ಬಹಳಷ್ಟು ಅಧಿಕಾರಿಗಳು ಭಾಗಿಯಾಗಿರುವುದು ನಿಜವೇ; ನಿಜವಾಗಿದ್ದಲ್ಲಿ, ಆರೋಪಿತ ಅಧಿಕಾರಿಗಳ ಹೆಸರು ಪದನಾಮದೊಂದಿಗೆ ವಿವರ ನೀಡುವುದು;

(ಇ) ಪೀಠೋಪಕರಣಗಳ ಗುಣಮಟ್ಟದ ಕುರಿತು ಅರಣ್ಯ ಇಲಾಖೆಯ ಪರಿಶೀಲನೆಗೆ ಒಳಪಡಿಸಲಾಗಿದೆಯೇ; ಹಾಗಿದ್ದಲ್ಲಿ, ಪರಿಶೀಲನಾ ವರದಿಯಲ್ಲಿರುವ ಅಂಶಗಳೇನು;

(ಈ) ೨೦೧೦ ರಿಂದ ೨೦೧೬ರವರೆಗಿನ ಬೆಂಚ್/ಡೆಸ್ಕ್ ಖರೀದಿ ಪ್ರಕ್ರಿಯೆಯ ಬಗ್ಗೆ ಅರಣ್ಯ ಇಲಾಖೆಯಿಂದ ಪಡೆದ ವರದಿಯ ಪ್ರತಿ ನೀಡುವುದು?

## ಮಕ್ಕಳ ಹಕ್ಕುಗಳ ಗ್ರಾಮಸಭೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೬೨(೨೫೮೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ೨೦೦೬ರಲ್ಲಿಯೇ "ಮಕ್ಕಳ ಹಕ್ಕುಗಳ ಗ್ರಾಮಸಭೆ"ಯನ್ನು ಜಾರಿಗೆ ತಂದಿದೆ; ಅದು ಇಂದಿಗೆ ೧೦ ವರ್ಷ ಕಳೆದಿದ್ದು ಈ ಯೋಜನೆ ಕರ್ನಾಟಕದ ಗ್ರಾಮ ಪಂಚಾಯ್ತಿಯಲ್ಲಿ ಎಷ್ಟರ ಮಟ್ಟಿಗೆ ಜಾರಿಯಲ್ಲಿದೆ ಮತ್ತು ಇದರ ಬಗ್ಗೆ ಎಷ್ಟು ಜನರಿಗೆ ತಿಳಿದಿದೆ. ಗ್ರಾಮ ಪಂಚಾಯಿತಿಯ ಸದಸ್ಯರು ಮತ್ತು ಪದಾಧಿಕಾರಿಗಳಿಗೆ ಇದರ ಬಗ್ಗೆ ಸರ್ಕಾರದಿಂದ ಯಾವ ರೀತಿ ತರಬೇತಿ ನೀಡಲಾಗಿದೆ;

(ಆ) ಮಕ್ಕಳ ಹಕ್ಕುಗಳ ಗ್ರಾಮಸಭೆಯು ಎಲ್ಲಾ ಗ್ರಾಮ ಪಂಚಾಯಿತಿಯಲ್ಲಿ ಕಡ್ಡಾಯವಾಗಿ ನಡೆಸಬೇಕು ಎನ್ನುವ ಸುತ್ತೋಲೆಯನ್ನು ಹೊರಡಿಸಿದ್ದರೂ ಸಹ ಅನೇಕ ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹೌದಾದಲ್ಲಿ, ಅಂತಹ ಗ್ರಾಮ ಪಂಚಾಯಿತಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಎಷ್ಟು ಗ್ರಾಮ ಪಂಚಾಯಿತಿ ಸದಸ್ಯರಿಗೆ ಮತ್ತು ಪದಾಧಿಕಾರಿಗಳಿಗೆ ಮಕ್ಕಳ ಹಕ್ಕುಗಳ ಕುರಿತು ತರಬೇತಿ ನೀಡಲಾಗಿದೆ? (ವಿವರ ನೀಡುವುದು)

## ಸರ್ಕಾರಿ ಶಾಲೆಗಳ ದುರಸ್ತಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೨೬೩(೨೫೭೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; (ಕಿರಿಯ, ಹಿರಿಯ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವಂತ ಕಟ್ಟಡ ಹೊಂದಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು;

(ಇ) ೨೦೧೫–೧೬ನೇ ಸಾಲಿನ ಡೈಸ್ (ಜಿಲ್ಲಾ ಶೈಕ್ಷಣಿಕ ಮಾಹಿತಿ ವ್ಯವಸ್ಥೆ) ಮಾಹಿತಿ ಪ್ರಕಾರ ರಾಜ್ಯದಲ್ಲಿ ಶಿಥಿಲಗೊಂಡ ಸ್ಥಿತಿಯಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು; (ಕಿರಿಯ, ಹಿರಿಯ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಜಿಲ್ಲಾವಾರು ವಿವರ ನೀಡುವುದು)

(ಈ) ಕಳೆದ ೪ ವರ್ಷಗಳಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಬಿಡುಗಡೆಯಾದ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಉ) ಹೆಚ್ಚಿನ ಶಾಲೆಗಳು ಮೂಲ ಸೌಲಭ್ಯಗಳ ಕೊರತೆಯಿಂದ ನಲುಗುತ್ತಿದ್ದು, ಅನೇಕ ವರ್ಷಗಳಿಂದ ಕೊಠಡಿಗಳ ದುರಸ್ಥಿಗೆ ಸರ್ಕಾರದಿಂದ ಅನುದಾನ ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು?

## ಬಳ್ಳಾರಿ ಜಿಲ್ಲೆಯಲ್ಲಿ ಬರುವ ಹೂವಿನ ಹಡಗಲಿ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೨೬೪(೨೫೮೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬಳ್ಳಾರಿ ಜಿಲ್ಲೆಯಡಿ ಬರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ಎಷ್ಟು; ಅವು ಯಾವುವು; ಇವುಗಳ ವ್ಯಾಪ್ತಿಗೆ ಬರುವ ಕ್ಷೇತ್ರಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಹಡಗಲಿ ತಾಲ್ಲೂಕಿನಿಂದ ಭೌಗೋಳಿಕವಾಗಿ ಜಿಲ್ಲಾ ಕೇಂದ್ರದಿಂದ ಗ್ರಾಮಗಳು ಬಹಳಷ್ಟು ದೂರ ಇರುವುದರಿಂದ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಹಾಗೂ ಶಾಲೆಗಳ ಮೇಲ್ವಿಚಾರಣೆಯಲ್ಲಿ ಅನಾನುಕೂಲವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು: (ಮಾಹಿತಿ ನೀಡುವುದು)

(ಇ) ಸಾರ್ವಜನಿಕರ, ವಿದ್ಯಾರ್ಥಿಗಳ ಹಾಗೂ ಶಾಲೆಗಳ ಮೇಲ್ವಿಚಾರಣೆಗಾಗಿ ಹೂವಿನ ಹಡಗಲಿ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಣೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಇದ್ದರೆ, ಹೂವಿನ ಹಡಗಲಿ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಣೆ ಮಾಡಲು ಸರ್ಕಾರ ಮುಂದಾಗುವುದೇ; (ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಹೂವಿನ ಹಡಗಲಿ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಣೆ ಮಾಡಲಾಗುವುದು ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದರೆ, ಹೂವಿನ ಹಡಗಲಿ ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಣೆ ಮಾಡುವುದು ಯಾವಾಗ? (ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳ ದುರಸ್ತಿ ಮಾಡದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೫(೨೪೬೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಬೀಳುವ ಹಂತದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಗುರುತಿಸಲಾಗಿದೆಯೇ; (ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ, ಬೀಳುವ ಹಂತದಲ್ಲಿರುವ/ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಾವುವು;

(ಇ) ಬೀಳುವ ಹಂತದಲ್ಲಿರುವ ಶಾಲಾ ಕಟ್ಟಡಗಳಿಂದ ಮಕ್ಕಳಿಗಿರುವ ಅಪಾಯವನ್ನು ಅಂದಾಜಿಸಲಾಗಿದೆಯೇ; ಹೌದು ಎಂದಾದಲ್ಲಿ, ಕಟ್ಟಡ ಕೆಡವಲು ಅಥವಾ ಬದಲಿ ವ್ಯವಸ್ಥೆ ಮಾಡಲು ಯಾವ ಕ್ರಮ ವಹಿಸಲಾಗಿದೆ;

(ಈ) ಬೀಳುವ/ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಕೆಡವಿದ ನಂತರ ಹೊಸ ಕಟ್ಟಡ ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡಲಾಗಿದೆಯೇ? (ಮಾಹಿತಿ ನೀಡುವುದು)

## ಶಿಕ್ಷಕರ ಹುದ್ದೆಗಳನ್ನು ಸಿ.ಇ.ಟಿ. ಮೂಲಕವೇ ತುಂಬುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೬೬(೨೬೪೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಶಿಕ್ಷಕ ಹಾಗೂ ಶಿಕ್ಷಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ; ಸದರಿ ಹುದ್ದೆಗಳನ್ನು ಆಗಿಂದಾಗ್ಗೆ ಭರ್ತಿ ಮಾಡದಿರಲು ಕಾರಣಗಳೇನು;

(ಆ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ನೇಮಕ ಮಾಡಿಕೊಳ್ಳುವಾಗ ಸಿ.ಇ.ಟಿ. ಪ್ರವೇಶ ಪರೀಕ್ಷೆ ಮೂಲಕವೇ ಭರ್ತಿ ಮಾಡಲಾಗುತ್ತಿದೆಯೇ; ನೇಮಕಾತಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಏನು;

(ಇ) ನೇಮಕಾತಿ ಪ್ರಕ್ರಿಯೆಯು ಬಹಳಷ್ಟು ವಿಳಂಬವಾಗಿರುವುದರಿಂದ ೩೪ ವರ್ಷ ಮೇಲ್ಪಟ್ಟವರಿಗೂ ಸಹ ಶೇಕಡವಾರು ಕೆಲವೊಂದು ಹುದ್ದೆಗಳನ್ನು ಮೀಸಲಿಡುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಸಿ.ಇ.ಟಿ. ಪ್ರವೇಶ ಪರೀಕ್ಷೆ ಮೂಲಕವಲ್ಲದೆ ನೇರ ನೇಮಕಾತಿ ಮಾಡಿಕೊಂಡರೆ ೩ ವರ್ಷಗಳ ಹಿಂದೆ ಪದವಿ ಪಡೆದಂತಹ ಅಭ್ಯರ್ಥಿಗಳಿಗೆ ಬಹಳಷ್ಟು ತೊಂದರೆ ಆಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಶಾಲಾ–ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳೆಷ್ಟು; (ವಿವರ ನೀಡುವುದು)

(ಊ) ಶಾಲಾ ಶಿಕ್ಷಣದಲ್ಲಿ ದೈಹಿಕ ಶಿಕ್ಷಣವನ್ನು ಬೋಧನಾ ಹಾಗೂ ಪಠ್ಯ ವಿಷಯವನ್ನಾಗಿ ಮಾಡಿ ಆದೇಶ ಹೊರಡಿಸಿರುವುದರಿಂದ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?

## ಮಂಗಳೂರು ವಿಮಾನ ನಿಲ್ದಾಣದ Runway ಅನ್ನು ವಿಸ್ತರಿಸುವ ಯೋಜನೆಯ ಬಗ್ಗೆ

**ಕ್ಯಾಪ್ಟನ್. ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೬೭(೨೬೧೭) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಮಾನ ಅಭಿವೃದ್ಧಿ ಪ್ರಾಧಿಕಾರದ ಅಧೀನದಲ್ಲಿರುವ ಮಂಗಳೂರು ವಿಮಾನ ನಿಲ್ದಾಣದಲ್ಲಿ ಎಷ್ಟು Runwayಗಳಿವೆ; ಅವುಗಳ ಉದ್ದವೆಷ್ಟು;

(ಆ) ಈ Runwayಯನ್ನು ವಿಸ್ತರಿಸುವ ಯೋಜನೆಯು ಸರ್ಕಾರದ ಮುಂದಿದೆಯೇ;

(ಇ) ಇದ್ದಲ್ಲಿ, ಈಗಿರುವ Runwayಯನ್ನು ಇನ್ನು ಎಷ್ಟು ಹೆಚ್ಚು ಉದ್ದಕ್ಕೆ ವಿಸ್ತರಿಸಲಾಗುವುದು ಹಾಗೂ ಈ ವಿಸ್ತರಣೆಯಿಂದ ಯಾವ ವಿಮಾನಗಳನ್ನು ಇಳಿಸಲು ಅನುಕೂಲವಾಗುವುದು;

(ಈ) ಮಂಗಳೂರು ವಿಮಾನ ನಿಲ್ದಾಣದ ವ್ಯಾಪ್ತಿಯಲ್ಲಿರುವ ಹಳೇ Runwayಯನ್ನು ಈಗ ಉಪಯೋಗಿಸಲಾಗುತ್ತಿದೆಯೇ; (ವಿವರ ನೀಡುವುದು)

(ಉ) Runwayಯ ವಿಸ್ತರಣೆಗೆ ಅವಶ್ಯ ಇರುವ ಭೂಮಿಯನ್ನು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ವಿಮಾನ ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ವಿಸ್ತರಣೆಯ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

## ಅಕ್ರಮ ಮರಳು ಸಾಗಾಣಿಕೆ ವಿಚಾ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೮(೨೫೬೯) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮರಳು ಹರಾಜಿನಿಂದ ಕಳೆದ ಮೂರು ವರ್ಷಗಳಲ್ಲಿ ಬಂದ ಆದಾಯವೆಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಕ್ರಮವಾಗಿ ಮರಳು ಸಾಗಿಸುತ್ತಿದ್ದವರಿಂದ ವಸೂಲಿ ಮಾಡಿದ ಹಣವೆಷ್ಟು; (ವರ್ಷಾವಾರು ವಿವರ ನೀಡುವುದು)

(ಇ) ಅಕ್ರಮವಾಗಿ ಮರಳು ಸಾಗಾಣಿಕೆ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಎಷ್ಟು ಪ್ರಕರಣಗಳನ್ನು ಅಕ್ರಮ ಮರಳು ಸಾಗಾಣಿಕೆದಾರರ ವಿರುದ್ಧ ಹೂಡಲಾಗಿದೆ? (ಮೂರು ವರ್ಷಗಳ ವಿವರ ನೀಡುವುದು)

## ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ತೆರವಾದ ಹುದ್ದೆಗಳನ್ನು ತುಂಬಿಕೊಳ್ಳುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೬೯(೨೬೪೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಈ ಹಿಂದೆ ೦೧-೦೧-೨೦೦೯ ರಿಂದ ૩೧-೧೨-೨೦೧೨ರವರೆಗೆ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಖಾಲಿ ಇದ್ದ ಒಟ್ಟು ೧೩೩೪ ಹುದ್ದೆಗಳನ್ನು ಆಡಳಿತ ಮಂಡಳಿಗಳಿಗೆ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿದ್ದು ನಿಜವೇ;

(ಆ) ಈ ರೀತಿ ಅನುಮತಿ ನೀಡಿದ ೧೩೩೪ ಹುದ್ದೆಗಳಲ್ಲಿ ಆಡಳಿತ ಮಂಡಳಿಯವರು ಒಟ್ಟು ೭೧೪ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ಪಡೆದುಕೊಂಡಿದ್ದು, ನಿಜವೇ; ಇದು ಅಲ್ಲದೇ ಆಡಳಿತ ಮಂಡಳಿಗಳು ಇಲಾಖೆಯಿಂದ ಅನುಮತಿ ಪಡೆದುಕೊಂಡು ೭೧೪ ಹುದ್ದೆಗಳ ಪೈಕಿ ೫೮೫ ಹುದ್ದೆಗಳನ್ನು ಮಾತ್ರ ತುಂಬಿಕೊಂಡಿರುವುದು ನಿಜವೇ;

(ಇ) ಸರ್ಕಾರದ ಆರ್ಥಿಕ ಇಲಾಖೆಯಿಂದ ಈಗಾಗಲೇ ಮಂಜೂರು ಮಾಡಿದ ೧೩೩೪ ಹುದ್ದೆಗಳಲ್ಲಿ ಖಾಸಗಿ ಆಡಳಿತ ಮಂಡಳಿಗಳು ಇನ್ನೂ ೬೨೦ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಸದ್ಯ ಹುದ್ದೆ ತುಂಬಲು ನಿಗದಿಪಡಿಸಿದ ದಿನಾಂಕ ૩೧-೧೨-೨೦೧೨ ಅನ್ನು ದಿನಾಂಕ ૩೧-೧೨-೨೦೧೫ರವರೆಗೆ ವಿಸ್ತರಿಸಲು ಇರುವ ಅಡೆತಡೆಗಳೇನು? (ವಿವರ ನೀಡುವುದು)

# ಕುಡಿಯುವ ನೀರಿನ ಬಿಲ್ಲುಗಳು ಪಾವತಿಯಾಗದೆ ಬಾಕಿಯಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೦(೨೪೬೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅದರಲ್ಲೂ ವಿಜಯಪುರ ಜಿಲ್ಲೆಗಳಲ್ಲಿ ಈ ಹಿಂದೆ ಗ್ರಾಮಗಳಿಗೆ ಪೂರೈಸಿದ ಕುಡಿಯುವ ನೀರಿನ ಬಿಲ್ಲುಗಳೇ ಇನ್ನೂವರೆಗೂ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಒಂದು ಕಡೆ ಸರ್ಕಾರ ಬರ ನಿರ್ವಹಣೆಗೆ ಅನುದಾನದ ಕೊರತೆ ಇಲ್ಲ ಎಂದು ಹೇಳುತ್ತಿರುವುದು ಈ ಕಡೆ ಬಿಲ್ ಪಾವತಿಯಾಗದಿರುವುದಕ್ಕೆ ಕಾರಣಗಳೇನು;

(ಇ) ಬರ ನಿರ್ವಹಣೆಗೆ ಸರ್ಕಾರ ಮಾಡಿಕೊಂಡ ಸಿದ್ಧತೆಗಳೇನು; ಕೈಗೊಂಡಿರುವ ಯೋಜನೆಗಳಾವುವು; ಮತ್ತು ಅವುಗಳಿಗೆ ಜಿಲ್ಲಾವಾರು, ತಾಲ್ಲೂಕುವಾರು ಬಿಡುಗಡೆ ಮಾಡಿರುವ ಅನುದಾನವೆಷ್ಟು;

(ಈ) ಬರ ನಿರ್ವಹಣೆಯ ಶಾಶ್ವತ ಪರಿಹಾರಕ್ಕಾಗಿ ಸರ್ಕಾರವು ಯೋಜನೆ ರೂಪಿಸಿದೆಯೇ? (ವಿವರವಾದ ಮಾಹಿತಿ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಸೂಮು 201 – ಪ್ರತಿಗಳು (ಎ1)